# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 569 |
| 2. | ಸದಸ್ಯರ ಹೆಸರು | : | ಶ್ರೀ ಟಿ.ಎನ್.ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) |
| 3. | ಉತ್ತರಿಸಬೇಕಾದ ದಿನಾಂಕ | : | 14.08.2025 |
| 4. | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ನಮ್ಮ ಮೆಟ್ರೋ ಜಾಲವನ್ನು 4ನೇ ಹಂತದಲ್ಲಿ ವಿಸ್ತರಣೆ ಮಾಡಲು ಸರ್ಕಾರವು ಹೇಳಿಕೆ ನೀಡಿರುವುದು ನಿಜವೇ; | ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ. |
| ಆ) | ಹಾಗಿದ್ದಲ್ಲಿ, ಯಾವ ಯಾವ ಮಾರ್ಗಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ; ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು; ಈ ಯೋಜನೆಯ ಪ್ರಕ್ರಿಯೆಗಳು ಯಾವ ಹಂತದಲ್ಲಿ ಇವೆ; (ವಿವರ ನೀಡುವುದು) | |
| ಇ) | ಈ ಮೆಟ್ರೋ ಜಾಲವನ್ನು ವಿಸ್ತರಿಸುವ ಯೋಜನೆಯಲ್ಲಿ ತುಮಕೂರು ರಸ್ತೆಯ ಮಾದಾವರದಿಂದ ಅರಿಶಿನಕುಂಟೆ - ನೆಲಮಂಗಲ ಮತ್ತು ತುಮಕೂರು ರಸ್ತೆ ಟೋಲ್ ಕೆ.ಬಿ.ಡಿ. ತನಕ ಯೋಜನೆಯನ್ನು ರೂಪಿಸಲಾಗಿದೆಯೇ; (ಸಂಪೂರ್ಣ ಮಾಹಿತಿಯೊಂದಿಗೆ ವಿವರ ನೀಡುವುದು) | ಮಾದಾವರದಿಂದ ತುಮಕೂರುವರೆಗಿನ 59.60 ಕಿ.ಮೀ.ಗಳ ಉದ್ದದ ಮೆಟ್ರೋ ರೈಲು ಯೋಜನೆಯನ್ನು ರೂಪಿಸಲಾಗಿರುತ್ತದೆ. |
| (ಈ) | ತುಮಕೂರು ರಸ್ತೆಯು ರಾಜ್ಯದ 25 ಜಿಲ್ಲೆಗಳಿಂದ ಮತ್ತು ಹೊರ ರಾಜ್ಯಗಳಿಂದ ಬರುವ ವಾಹನಗಳಿಗೆ ರಾಜ್ಯದ ಹೆಬ್ಬಾಗಿಲು ಆಗಿದ್ದು, ಜನ ವಾಹನ ಸಂದಣಿ ಹೆಚ್ಚಿಗೆ ಇರುವುದರಿಂದ ಮೆಟ್ರೋ 3ಎ ಹಂತದಲ್ಲಿಯೇ ಈ ಯೋಜನೆಯನ್ನು ತೆಗೆದುಕೊಳ್ಳಲು ಸರ್ಕಾರಕ್ಕಿರುವ ತೊಂದರೆ ಏನು; (ವಿವರ ನೀಡುವುದು) | ಉದ್ಭವಿಸುವುದಿಲ್ಲ. |
| (ಉ) | ಮುಂದುವರಿದು ಸರ್ಕಾರದಿಂದ ಮಾಗಡಿ ರಸ್ತೆ ಮೂಲಕ ಹಾದು ಹೋಗುವ ಮೆಟ್ರೋ ಯೋಜನೆಯ ಕಾಮಗಾರಿಗಳು ಯಾವ ಹಂತದಲ್ಲಿ ನಡೆಯುತ್ತಿವೆ? (ವಿವರಣೆ ನೀಡುವುದು) | ಬೆಂಗಳೂರು ಮೆಟ್ರೋ ರೈಲು ಯೋಜನೆ ಹಂತ-3ರ ಕಾರಿಡಾರ್-2 ಮಾಗಡಿ ರಸ್ತೆಯ ಹೊಸಹಳ್ಳಿಯಿಂದ ಕಡಬಗೆರೆವರೆಗೆ 12.50 ಕಿ.ಮೀ.ಗಳ ಉದ್ದವಿದ್ದು, ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರಗಳು ಈ ಯೋಜನೆಯನ್ನು ಅನುಮೋದಿಸಿದ್ದು, ಪ್ರಸ್ತುತ ಪ್ರಾಥಮಿಕ ಹಂತದ ತಯಾರಿಗಳು ಪ್ರಗತಿಯಲ್ಲಿವೆ. ಶೀಘ್ರದಲ್ಲೇ ಟೆಂಡರ್‌ಗಳನ್ನು ಆಹ್ವಾನಿಸಲು ಕ್ರಮ ಕೈಗೊಳ್ಳಲಾಗುವುದು. |

ಕಡತ ಸಂಖ್ಯೆ: ನಅಇ 142 ಪಿ.ಆರ್.ಜೆ 2025

**(ಡಿ. ಕೆ. ಶಿವಕುಮಾರ್)**
ಉಪ ಮುಖ್ಯಮಂತ್ರಿ